49 (48) ಶ್ರೀ ಧ್ರುವನಾರಾಯಣ. ಆರ್. (ಸಂತೇಮರಳ್ಳಿ) : ಜಲ ಸಂಪನ್ಮೂಲ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಬದನವಾಳು ಏತ ನೀರಾವರಿ ಯೋಜನೆಗೆ ಆಡಳಿತಾತ್ಮಕ ಹಾಗೂ ತಾಂತ್ರಿಕ ಮಂಜೂರಾತಿ ದೊರಕಿದೆಯೇ :

ಆ) ದೊರೆತಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಕೆ.ಎಸ್. ಈಶ್ವರಪ್ಪ (ಜಲ ಸಂಪನ್ಮೂಲ ಸಚಿವರು) :

ಅ) ಹೌದು.

ಆ) ಯೋಜನೆಯಲ್ಲಿನ ಕೆಲವು ಅಂಗಗಳಲ್ಲಿನ ಸ್ವರೂಪ ಬದಲಾದ ಕಾರಣ, ವಿನ್ಯಾಸದಲ್ಲಿ ಉಂಟಾದ ಮಾರ್ಪಾಡಿನನ್ವಯ ಅಂದಾಜನ್ನು ಪರಿಷ್ಕರಿಸಲಾಗುತ್ತಿದೆ. 2006–07ನೇ ಸಾಲಿಗೆ ರೂ. 8.00 ಕೋಟಿಗಳ ಅನುದಾನವನ್ನು ಒದಗಿಸಿಕೊಳ್ಳಲಾಗಿದೆ.

50(130) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) : ಮಾನ್ಯ ವಸತಿ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಬೀದರ್ ಜಿಲ್ಲೆಯಲ್ಲಿ ರಾಜ್ಯ ಹಾಗೂ ಕೇಂದ್ರದ ವಿವಿಧ ವಸತಿ ಯೋಜನೆಯಡಿಯಲ್ಲಿ ಕಳೆದ ಸಾಲಿನಲ್ಲಿ ನಿರ್ಮಿಸಲಾಗಿರುವ ಮನೆಗಳ ಸಂಖ್ಯೆ ಎಷ್ಟು ? (ವಿಧಾನ ಸಭಾ ಕ್ಷೇತ್ರವಾರು ವಿವರಗಳನ್ನು ಒದಗಿಸುವುದು);

ಆ) ಮೇಲ್ಕಂಡ ಅವಧಿಯಲ್ಲಿ ಎಷ್ಟು ಗುರಿಯನ್ನು ಹೊಂದಲಾಗಿತ್ತು ಮತ್ತು ಈ ಅವಧಿಯಲ್ಲಿ ಸಾಧಿಸಿರುವ ಪ್ರಗತಿ ಎಷ್ಟು (ಪೂರ್ಣ ವಿವರಗಳನ್ನು ಒದಗಿಸುವುದು);

ಇ) ಈ ಸಾಲಿನ ಆಯವ್ಯಯದಲ್ಲಿ ರಾಜ್ಯ ಹಾಗೂ ಕೇಂದ್ರದ ಸರ್ಕಾರವು ವಿವಿಧ ವಸತಿ ಯೋಜನೆಯಡಿಯಲ್ಲಿ ಜಿಲ್ಲೆಯಲ್ಲಿ ನಿರ್ಮಿಸಲು ಉದ್ದೇಶಿಸಿರುವ ಮನೆಗಳ ಸಂಖ್ಯೆ ಎಷ್ಟು (ವಿಧಾನಸಭಾ ಕ್ಷೇತ್ರವಾರು ಅಂಕಿ ಅಂಶಗಳ ಪೂರ್ಣ ವಿವರಗಳನ್ನು ಒದಗಿಸುವುದು):

ಈ) ಇದಕ್ಕಾಗಿ ವೆಚ್ಚ ಮಾಡಲಾಗುವ ಹಣದ ಮೊತ್ತವೆಷ್ಟು?

ಶ್ರೀ ಡಿ.ಟಿ. ಜಯಕುಮಾರ್ (ವಸತಿ ಸಚಿವರು) :

ಅ) ಬೀದರ್ ಜಿಲ್ಲೆಯಲ್ಲಿ ರಾಜ್ಯ ಹಾಗೂ ಕೇಂದ್ರದ ವಿವಿಧ ವಸತಿ ಯೋಜನೆಯಡಿಯಲ್ಲಿ ಕಳೆದ ಸಾಲಿನಲ್ಲಿ ಅಂದರೆ 2004–05ನೇ ಸಾಲಿನಲ್ಲಿ ಒಟ್ಟು 4599 ಮನೆಗಳನ್ನು ನಿರ್ಮಿಸಲಾಗಿದೆ. ಅವುಗಳ ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ಅನುಬಂಧ 'ಅ' ನಲ್ಲಿ ನೀಡಲಾಗಿದೆ.

ಆ) ಈ ಅವಧಿಯಲ್ಲಿ ಅಂದರೆ 2004–05ನೇ ಸಾಲಿನಲ್ಲಿ ರಾಜ್ಯ ಸರ್ಕಾರವು ಯಾವುದೇ ಗುರಿಯನ್ನು ನೀಡಿರುವುದಿಲ್ಲ. ಕೇಂದ್ರ ಸರ್ಕಾರದಿಂದ ಇಂದಿರಾ ಆವಾಸ್ ಯೋಜನೆಯಡಿಯಲ್ಲಿ 1908 ಮನೆಗಳ ಗುರಿಯನ್ನು ಮತ್ತು ಪ್ರಧಾನ ಮಂತ್ರಿ ಗ್ರಾಮೀಣ ಆವಾಸ್ ಯೋಜನೆಯಡಿಯಲ್ಲಿ 163 ಮನೆಗಳ ಗುರಿಯನ್ನು ಹೊಂದಲಾಗಿತ್ತು. ಇಂದಿರಾ ಆವಾಸ್ ಯೋಜನೆಯಡಿಯಲ್ಲಿ 1079